All India Radio: Bangalore
National Bulletin In Kannada
13.01.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪ್ರಯಾಗ್‌ರಾಜ್‌ನಲ್ಲಿ ಇಂದು ಮಹಾಕುಂಭ ಮೇಳಕ್ಕೆ ವಿದ್ಯುಕ್ತ ಚಾಲನೆ
- ಭಾರತದ ಗಡಿಗಳಲ್ಲಿ ಪರಿಸ್ಥಿತಿ ಸ್ಥಿರವಾಗಿದೆ - ಭಾರತೀಯ ಸೇನಾ ಮುಖ್ಯಸ್ಥ ಉಪೇಂದ್ರ ದ್ವಿವೇದಿ
- ಹಜ್ ಒಪ್ಪಂದ ೨೦೨೫ಕ್ಕೆ ಭಾರತ, ಸೌದಿ ಅರೇಬಿಯಾ ಸಹಿ
- ಇಂಡಿಯನ್ ಸೂಪರ್ ಲೀಗ್ ಫುಟ್ಬಾಲ್; ಕೇರಳ ಬ್ಲಾಸ್ಟರ್ಸ್ - ಒಡಿಶಾ ತಂಡಗಳು ಮುಖಾಮುಖಿ

*****************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ, ಪುಷ್ಯ ಪೂರ್ಣಿಮೆಯ ದಿನವಾದ ಇಂದು ವಿಶ್ವದ ಅತಿದೊಡ್ಡ ಆತ್ಯಾಧ್ಮಿಕ ಮತ್ತು ಸಾಂಸ್ಕೃತಿಕ ಉತ್ಸವವಾದ ಮಹಾಕುಂಭಮೇಳಕ್ಕೆ ವಿದ್ಯುಕ್ತ ಚಾಲನೆ ದೊರೆತಿದೆ.

ಗಂಗಾ, ಯಮುನಾ, ಸರಸ್ವತಿ ನದಿಗಳ ತ್ರಿವೇಣಿ ಸಂಗಮದ ವಿವಿಧ ಘಾಟ್‌ಗಳಲ್ಲಿ ಲಕ್ಷಾಂತರ ಭಕ್ತರು, ಯಾತ್ರಿಕರು ದಿವ್ಯ ಅಭ್ಯಂಜನ-ಪುಣ್ಯ ಸ್ನಾನದಲ್ಲಿ ನಿರತರಾಗಿದ್ದಾರೆ. ೧೪೪ ವರ್ಷಗಳಲ್ಲಿ ಒಂದು ಬಾರಿ ನಡೆಯುವ ಗ್ರಹಗಳ ಅಪರೂಪದ ಸಂಯೋಜನೆ ಈ ಬಾರಿಯ ಮಹಾಕುಂಭದ ವಿಶೇಷತೆಯನ್ನು ಹೆಚ್ಚಿಸಿದೆ. ಸುಗಮ, ಸುರಕ್ಷಿತ ಮತ್ತು ಸ್ಮರಣೀಯ ಮಹಾಕುಂಭವನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಸಕಲ ವ್ಯವಸ್ಥೆ ಕಲ್ಪಿಸಿದೆ.

ಶ್ರದ್ಧಾಳುಗಳ ಆರೋಗ್ಯ ರಕ್ಷಣೆ, ಅನುಕೂಲ, ಸೌಕರ್ಯ ಹಾಗೂ ಇತರೆ ಅಗತ್ಯಗಳಿಗಾಗಿ ವ್ಯಾಪಕ ವ್ಯವಸ್ಥೆ ಮಾಡಲಾಗಿದೆ. ಈ ಸಂದರ್ಭದಲ್ಲಿ ದೇಶದ ಶ್ರೀಮಂತ ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುವ ಅನೇಕ ಕಾರ್ಯಕ್ರಮ ಹಾಗೂ ತಾಣಗಳನ್ನು ಆಯೋಜಿಸಲಾಗಿದೆ. ಸುರಕ್ಷತೆಯ ದೃಷ್ಟಿಯಿಂದ, ಮಹಾಕುಂಭಕ್ಕೆ ಏಳು ಸುತ್ತಿನ ಭದ್ರತೆ ಒದಗಿಸಲಾಗಿದೆ.

ಕುಂಭಮೇಳ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ದೇಶದ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ. ಮಹಾಕುಂಭಮೇಳ ದೇಶದ ಆಧ್ಯಾತ್ಮಿಕ ಪರಂಪರೆ ಸಹಕಾರ ರೂಪವಾಗಿದೆ. ಈ ಹಬ್ಬ ಎಲ್ಲರಲ್ಲೂ ಹೊಸ ಶಕ್ತಿ ಮತ್ತು ಉತ್ಸಾಹವನ್ನು ತರಲಿ ಎಂದು ಪ್ರಾರ್ಥಿಸಿದ್ದಾರೆ.

*****************

ಸುಮಾರು ೪೦ ಕೋಟಿ ಮಂದಿ ಈ ಮಹಾಕಂಭ ಮೇಳದಲ್ಲಿ ಭಾಗವಹಿಸುವ ಸಾಧ್ಯತೆಯಿದ್ದು, ಇದೇ ಮೊದಲ ಬಾರಿಗೆ ಭದ್ರತೆಗೆ ಕೃತಕ ಬುದ್ಧಿಮತ್ತೆ- ಎಐ ತಂತ್ರಜ್ಞಾನ ಬಳಕೆ ಮಾಡಲಾಗಿದೆ.

ಕೃತಕ ಬುದ್ಧಿಮತ್ತೆ ಮತ್ತು ಸೈಬರ್ ಸುರಕ್ಷತೆ ತಂತ್ರಜ್ಞಾನಗಳನ್ನು ಪ್ರಯಾಗ್‌ರಾಜ್‌ನಲ್ಲಿ ಬಳಸಿರುವ ಬಗ್ಗೆ ಆಕಾಶವಾಣಿಯೊಂದಿಗೆ ಥೆಟಾ ಡೈನಾಮಿಕ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ಉದಯ ಶಂಕರ್ ಪುರಾಣಿಕ್ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ: ಡಾ.ಉದಯ ಶಂಕರ್

*****************

ಮಹಾಕುಂಭ ಮೇಳವು ಕೇವಲ ಆಧ್ಯಾತ್ಮಿಕ ಕೂಟ ಮಾತ್ರವಲ್ಲದೇ, ಜಾಗತಿಕ ಪ್ರವಾಸೋದ್ಯಮಕ್ಕೆ ಒಂದು ಹೆಗ್ಗುರುತಾಗಿದೆ ಎಂದು ಕೇಂದ್ರ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ.

ಆಕಾಶವಾಣಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ಮಹಾಕುಂಭ ಮೇಳದಂತಹ ಮಹತ್ವದ ಸಂದರ್ಭವನ್ನು ಆಚರಿಸಲು ಪ್ರವಾಸೋದ್ಯಮ ಸಚಿವಾಲಯ ದೇಶೀಯ ಮತ್ತು ಅಂತಾರಾಷ್ಟ್ರೀಯ ಪ್ರವಾಸೋದ್ಯಮವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಹಲವು ಉಪಕ್ರಮಗಳನ್ನು ಜಾರಿಗೆ ತಂದಿದೆ ಎಂದು ತಿಳಿಸಿದರು.

ಧ್ವನಿ: ಶೇಖಾವತ್

'ಇನ್‌ಕ್ರೆಡಿಬಲ್ ಇಂಡಿಯಾ' ಪ್ರದರ್ಶನವು ಪ್ರವಾಸಿಗರಿಗೆ ಒಂದು ಅದ್ಭುತ ಅನುಭವವನ್ನು ನೀಡುತ್ತಿದ್ದು, ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ಕುಂಭಮೇಳದ ಮಹತ್ವವನ್ನು ಸಾರುತ್ತಿದೆ ಎಂದರು.

ಮಹಾಕುಂಭ ಮೇಳದಲ್ಲಿ ಕಲಾಗ್ರಾಮವು ಕರಕುಶಲ ವಸ್ತುಗಳು, ಪಾಕ ಪದ್ಧತಿ ಮತ್ತು ಸಾಂಸ್ಕೃತಿಕ ಪ್ರದರ್ಶನಗಳ ಮೂಲಕ ರಾಷ್ಟ್ರದ ಕಾಲಾತೀತ ಸಂಪ್ರದಾಯಗಳನ್ನು ಪ್ರದರ್ಶಿಸುವ ಮತ್ತು ಆಧ್ಯಾತ್ಮಿಕತೆಯನ್ನು ಕಲಾ ನಿಪುಣತೆಯೊಂದಿಗೆ ಹೊಂದಾಗಿಸುವ ಸಚಿವಾಲಯದ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದರು.

*****************

ಉತ್ತರದ ಗಡಿಗಳಲ್ಲಿ ಪರಿಸ್ಥಿತಿ ಸೂಕ್ಷ್ಮವಾಗಿದ್ದರೂ ಸ್ಥಿರವಾಗಿದೆ ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಹೇಳಿದ್ದಾರೆ.

ಯಾವುದೇ ಪ್ರತಿಕೂಲ ಪರಿಸ್ಥಿತಿಯನ್ನು ಎದುರಿಸಲು ಭಾರತೀಯ ಪಡೆಗಳು ಸಜ್ಜಾಗಿವೆ ಮತ್ತು ಗಡಿ ಪ್ರದೇಶಗಳಲ್ಲಿ ಬಲವಾದ ಮೂಲಸೌಕರ್ಯವನ್ನು ನಿರ್ಮಿಸುವುದು ಭಾರತೀಯ ಸೇನೆಯ ಪ್ರಮುಖ ಆದ್ಯತೆಯಾಗಿದೆ ಎಂದು ಅವರು ತಿಳಿಸಿದರು.

ನವದೆಹಲಿಯಲ್ಲಿ ಇಂದು ಭಾರತೀಯ ಸೇನೆಯ ವಾರ್ಷಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜನರಲ್ ಉಪೇಂದ್ರ ದ್ವಿವೇದಿ, ಜಮ್ಮು ಮತ್ತು ಕಾಶ್ಮೀರ ಪ್ರದೇಶದಲ್ಲಿ ಪರಿಸ್ಥಿತಿ ನಿಯಂತ್ರಣದಲ್ಲಿದೆ ಮತ್ತು ಅದು ಭಯೋತ್ಪಾದನೆಯಿಂದ ಪ್ರವಾಸೋದ್ಯಮದತ್ತ ಸಾಗುತ್ತಿದೆ ಎಂದು ಹೇಳಿದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ೨೦೨೪ರಲ್ಲಿ ಭದ್ರತಾ ಪಡೆಗಳಿಂದ ಹತರಾದ ಭಯೋತ್ಪಾದಕರ ಪೈಕಿ ಶೇಕಡ ೬೦ರಷ್ಟು ಉಗ್ರರು ಪಾಕಿಸ್ತಾನದ ಮೂಲದವರಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಪರಿಸ್ಥಿತಿ ಪ್ರಸ್ತುತ ನಿಯಂತ್ರಣದಲ್ಲಿದೆ. ಆದರೆ ಗಡಿಯಾಚೆಯಿಂದ ಒಳನುಸುಳುವಿಕೆ ಪ್ರಯತ್ನಗಳು ಮುಂದುವರೆದಿವೆ ಎಂದು ಜನರಲ್ ಉಪೇಂದ್ರ ದ್ವಿವೇದಿ ಹೇಳಿದರು.

ಧ್ವನಿ: ಉಪೇಂದ್ರ ದ್ವಿವೇದಿ

*****************

ಭಾರತದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಜೆಡ್ಡಾದಲ್ಲಿ ಸೌದಿ ಅರೇಬಿಯಾದ ಹಜ್ ಮತ್ತು ಉಮ್ರಾ ಸಚಿವ ಡಾ. ತೌಫಿಕ್ ಬಿನ್ ಫೌಜಾನ್ ಅಲ್ ರಬಿಯಾ ಅವರೊಂದಿಗೆ ಹಜ್ ಒಪ್ಪಂದ ೨೦೨೫ಕ್ಕೆ ಸಹಿ ಹಾಕಿದರು.

ಈ ಒಪ್ಪಂದವು ಮುಂಬರುವ ಹಜ್ ಋತುವಿಗಾಗಿ ಭಾರತದಿಂದ ೧ ಲಕ್ಷದ ೭೫ ಸಾವಿರದ ೨೫ ಯಾತ್ರಿಕರ ಕೋಟಾವನ್ನು ಭದ್ರಪಡಿಸಲಿದೆ.

ಸೌದಿ ಅರೇಬಿಯಾ ಪ್ರವಾಸದಲ್ಲಿರುವ ರಿಜಿಜು ಅವರು ಹಲವು ಉನ್ನತ ಮಟ್ಟದ ಸಭೆಗಳಲ್ಲಿ ಭಾಗವಹಿಸಿದ್ದರು. ರಿಯಾದ್‌ನಲ್ಲಿ ಅವರು ಸೌದಿ ಅರೇಬಿಯಾದ ಸಾರಿಗೆ ಮತ್ತು ಸರಕು ಸೇವೆಗಳ ಸಚಿವ ಸಲೇಂಕ್ ಬಿನ್ ನಾಸರ್ ಅಲ್-ಜಸ್ಸರ್ ಅವರನ್ನು ಭೇಟಿ ಮಾಡಿ, ಉಭಯ ರಾಷ್ಟ್ರಗಳ ನಡುವಿನ ಸಾರಿಗೆ ಮತ್ತು ಸರಕು ವಲಯಗಳಲ್ಲಿ ಸಂಭಾವ್ಯ ಸಹಯೋಗಗಳನ್ನು ಚರ್ಚಿಸಿದರು.

ಎಲ್ಲಾ ಹಜ್ ಯಾತ್ರಾರ್ಥಿಗಳಿಗೆ ಅತ್ಯುತ್ತಮ ಸೇವೆಗಳನ್ನು ಒದಗಿಸುವ ಭಾರತದ ಬದ್ಧತೆಯನ್ನು ಸಚಿವ ಕಿರಣ್ ರಿಜಿಜು ಪುನರುಚ್ಚರಿಸಿದರು.

******************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು ಕಾಶ್ಮೀರಕ್ಕೆ ಭೇಟಿ ನೀಡಿ, ಸೋನ್‌ಮಾರ್ಗ್ ಸುರಂಗ ಯೋಜನೆಯನ್ನು ಲೋಕಾರ್ಪಣೆಗೊಳಿಸಿದರು.

ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿಯವರು ಸುರಂಗ ಮಾರ್ಗ ನಿರ್ಮಿಸಿದ ಕಾರ್ಮಿಕರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ಡಾ. ಜಿತೇಂದ್ರ ಸಿಂಗ್, ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್, ಮನೋಜ್ ಸಿನ್ಹಾ, ಮುಖ್ಯಮಂತ್ರಿ ಉಮರ್ ಅಬ್ದುಲ್ಲಾ, ಜಮ್ಮು-ಕಾಶ್ಮೀರ ಸಚಿವರು, ಸಂಸದರು ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಪ್ರಧಾನಿ ಸುರಂಗ ಮಾರ್ಗದ ಪರಿಶೀಲನೆ ನಡೆಸಿದರು.

ಸುಮಾರು ೧೨ ಕಿಲೋಮೀಟರ್ ಉದ್ದದ ಸೋನ್‌ಮಾರ್ಗ್ ಸುರಂಗ ಮಾರ್ಗವನ್ನು ೨ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಈ ಸುರಂಗ ಯೋಜನೆ, ಶ್ರೀನಗರ-ಸೋನ್‌ಮಾರ್ಗ್ ನಡುವೆ ಲೇಹ್ ಮೂಲಕ ಸಂಪರ್ಕ ಕಲ್ಪಿಸಲಿದೆ.

ಈ ಸರ್ವಋತು ಮಾರ್ಗ, ಲಡಾಖ್ ವಲಯಕ್ಕೆ ಭೂಕುಸಿತ ಮತ್ತು ಹಿಮಬಂಡೆ ಪಾತಕ್ಕೆ ಪರ್ಯಾಯವಾಗಿ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸಲಿದೆ. ಪ್ರವಾಸಿಗರಿಗೆ ಹಾಗೂ ಈ ಭಾಗದ ಆರ್ಥಿಕ ಚಟುವಟಿಕೆಗಳಿಗೆ ಇದರಿಂದ ಅತ್ಯಧಿಕ ಪ್ರಯೋಜನವಾಗಲಿದೆ. ಜೋಜಿಲ್ಲಾ ಸುರಂಗ ಮಾರ್ಗದ ಕಾಮಗಾರಿಯೂ ಪ್ರಗತಿಯಲ್ಲಿದ್ದು, ೨೦೨೮ರ ವೇಳೆಗೆ ಪೂರ್ತಿಗೊಳ್ಳುವ ನಿರೀಕ್ಷೆಯಿದೆ.

******************

ಪ್ರಧಾನಿ ನರೇಂದ್ರ ಮೋದಿ ಇದೇ ೧೫ ರಂದು ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದು, ಮುಂಬೈನ ನೌಕಾನೆಲೆಯಲ್ಲಿ ಕಾರ್ಯಾರಾಂಭ ಮಾಡಲಿರುವ ಮೂರು ಮುಂಚೂಣಿ ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘ್‌ಶೀರ್‌ಗಳನ್ನು ಅಂದು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘ್‌ಶೀರ್ ಯುದ್ಧ ನೌಕೆಗಳ ಕಾರ್ಯಾರಂಭ ರಕ್ಷಣಾ ಉತ್ಪಾದನೆ ಮತ್ತು ಕಡಲ ಭದ್ರತೆಯಲ್ಲಿ ಜಾಗತಿಕ ನಾಯಕನಾಗುವ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ.

ಪಿ೧೫ಬಿ ಮಾರ್ಗದರ್ಶಿ ಕ್ಷಿಪಣಿ ವಿಧ್ವಂಸಕ ಯೋಜನೆಯ ನಾಲ್ಕನೇ ಮತ್ತು ಅಂತಿಮ ಹಡಗು ಐಎನ್‌ಎಸ್ ಸೂರತ್, ವಿಶ್ವದ ಅತಿದೊಡ್ಡ ಮತ್ತು ಅತ್ಯಾಧುನಿಕ ವಿಧ್ವಂಸಕ ನೌಕೆಗಳಲ್ಲಿ ಸ್ಥಾನ ಪಡೆದಿದೆ. ಪಿ೧೭ಎ ಸ್ಟೀಲ್ತ್ ಫ್ರಿಗೇಟ್ ಯೋಜನೆಯ ಮೊದಲ ಹಡಗು ಐಎನ್‌ಎಸ್ ನೀಲಗಿರಿಯನ್ನು ಭಾರತೀಯ ನೌಕಾಪಡೆಯ ಯುದ್ಧನೌಕೆ ವಿನ್ಯಾಸ ಸಂಸ್ಥೆ ವಿನ್ಯಾಸಗೊಳಿಸಿದ್ದು, ಸುಧಾರಿತ ವೈಶಿಷ್ಟ್ಯಗಳನ್ನು ಒಳಗೊಂಡಿದೆ, ಐಎನ್‌ಎಸ್ ವಾಘಶೀರ್ ಜಲಾಂತರ್ಗಾಮಿ ನಿರ್ಮಾಣದಲ್ಲಿ ಭಾರತದ ಬೆಳೆಯುತ್ತಿರುವ ಪರಿಣತಿಯನ್ನು ಪ್ರತಿನಿಧಿಸುತ್ತದೆ.

ಭೇಟಿಯ ಸಮಯದಲ್ಲಿ, ಮುಂಬೈನ ಖಾರ್ಘರ್‌ನಲ್ಲಿ ಇಸ್ಕಾನ್ ದೇವಾಲಯವನ್ನು ಉದ್ಘಾಟಿಸಲಿದ್ದಾರೆ. ಒಂಬತ್ತು ಎಕರೆ ಪ್ರದೇಶದಲ್ಲಿ ಹರಡಿರುವ ಈ ಯೋಜನೆಯು ಹಲವು ದೇವತೆಗಳ ಮಂದಿರ, ವೇದ ಶಿಕ್ಷಣ ಕೇಂದ್ರ, ಪ್ರಸ್ತಾವಿತ ವಸ್ತುಸಂಗ್ರಹಾಲಯಗಳು ಮತ್ತು ಸಭಾಂಗಣವನ್ನು ಒಳಗೊಂಡಿದೆ.

******************

೨೦೪೭ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ದೇಶದ ಯುವ ಜನರು ಹೆಚ್ಚಿನ ಕೊಡುಗೆ ನೀಡಲಿದ್ದಾರೆ ಎಂದು ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಎನ್‌ಸಿಸಿ ಗಣರಾಜ್ಯೋತ್ಸವ ಶಿಬಿರದಲ್ಲಿ ಎನ್‌ಸಿಸಿ ಕೆಡೆಟ್‌ಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ವರ್ಷವಿಡೀ 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದ ಅಡಿಯಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಗಿಡಗಳನ್ನು ನೆಟ್ಟಿರುವ ಯುವ ಕೆಡೆಟ್‌ಗಳನ್ನು ಅವರು ಶ್ಲಾಘಿಸಿದರು.

'ಪುನೀತ್ ಸಾಗರ್' ಅಭಿಯಾನದ ಅಡಿಯಲ್ಲಿ ಸುಮಾರು ೩೨೭ ಟನ್ ತ್ಯಾಜ್ಯವನ್ನು ಕೆಡೆಟ್‌ಗಳು ವಿಲೇವಾರಿ ಮಾಡಿದ್ದಾರೆ. ಈ ವರ್ಷ ೧೦ ಲಕ್ಷಕ್ಕೂ ಹೆಚ್ಚು ಎನ್‌ಸಿಸಿ ಕೆಡೆಟ್‌ಗಳು ಅಂತಾರಾಷ್ಟ್ರೀಯ ಯೋಗದಲ್ಲಿ ಭಾಗವಹಿಸಿದ್ದಾರೆ ಎಂದು ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ.

*****************

ಕೊಚ್ಚಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ, ಕೇರಳ ಬ್ಲಾಸ್ಟರ್ಸ್ ಫುಟ್ಬಾಲ್ ಕ್ಲಬ್ ತಂಡ ಮತ್ತು ಒಡಿಶಾ ಕ್ಲಬ್ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

*****************

ಭಾರತ ಮತ್ತು ಬಾಂಗ್ಲಾದೇಶದ ಗಡಿಯನ್ನು ಅಪರಾಧ ಮುಕ್ತವಾಗಿಸಲು ಹಾಗೂ ಅಪರಾಧಿಗಳ ಚಲನವಲನ ಮತ್ತು ಕಳ್ಳಸಾಗಣೆಯ ಸವಾಲುಗಳನ್ನು ಪರಿಣಾಮಕಾರಿಯಾಗಿ ಎದುರಿಸುವ ಕುರಿತು ಢಾಕಾದಲ್ಲಿರುವ ಭಾರತದ ಹೈಕಮಿಷನರ್ ಪ್ರಣಯ ವರ್ಮ ಮತ್ತು ಬಾಂಗ್ಲಾದೇಶದ ವಿದೇಶಾಂಗ ಕಾರ್ಯದರ್ಶಿ ಎಂ.ಡಿ.ಜೌಸಿಮ್ ಉದ್ದೀನ ಇಂದು ಚರ್ಚಿಸಿದರು.

ಭದ್ರತೆಗಾಗಿ ಗಡಿ ಬೇಲಿ ಹಾಕುವ ವಿಷಯದ ಬಗ್ಗೆ ಎರಡು ದೇಶದ ಗಡಿ ಕಾವಲು ಪಡೆಗಳಾದ ಗಡಿ ಭದ್ರತಾ ಪಡೆ-ಬಿಎಸ್‌ಎಫ್ ಮತ್ತು ಬಾರ್ಡರ್ ಗಾರ್ಡ್ ಬಾಂಗ್ಲಾದೇಶ್-ಬಿ.ಜಿ.ಬಿ ಸಂವಹನ ನಡೆಸುತ್ತಿವೆ ಎಂದು ಪ್ರಣಯ ವರ್ಮ ತಿಳಿಸಿದರು.

ಮುಂದಿನ ದಿನಗಳಲ್ಲಿ ಬಾರ್ಡರ್ ಗಾರ್ಡ್ ಬಾಂಗ್ಲಾದೇಶ್-ಬಿ.ಜಿ.ಬಿ ಮತ್ತು ಬಿಎಸ್‌ಎಫ್ ಡೈರಕ್ಟರ್ ಜನರಲ್ ಮಟ್ಟದ ಮಾತುಕತೆ ಸಮಯದಲ್ಲಿ ಈ ವಿಷಯದ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗುತ್ತದೆ ಎಂದು ವಿದೇಶಾಂಗ ಕಾರ್ಯದರ್ಶಿ ಹೇಳಿದರು.

******************

೨೦೨೫ ರ ಖೋ ಖೋ ವಿಶ್ವಕಪ್ ಇಂದು ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ.

ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ಸಹಯೋಗದೊಂದಿಗೆ ಈ ಆವೃತ್ತಿ ಆರಂಭಗೊಳ್ಳಲಿದ್ದು, ಉದ್ಘಾಟನಾ ಆವೃತ್ತಿಯಲ್ಲಿ ೨೦ ಪುರುಷರು ಮತ್ತು ೧೯ ಮಹಿಳಾ ತಂಡಗಳು ಭಾಗವಹಿಸಲಿವೆ.

*********ಮುಕ್ತಾಯ*********